ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ನಿರ್ಭಯ ಯೋಜನೆಯಡಿ ಮಹಿಳೆಯರ ಸುರಕ್ಷತೆ ಮತ್ತು ಭದ್ರತೆ ಕುರಿತು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

15 (25) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ನಿರ್ಭಯ ಯೋಜನೆಯಡಿ ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಭದ್ರತೆ ಒದಗಿಸಲು ಕೇಂದ್ರ ಸರ್ಕಾರದಿಂದ ಕಳೆದ 5 ವರ್ಷಗಳಿಂದ ಪಡೆದಿರುವ ಅನುದಾನವೆಷ್ಟು;

(ಆ) ಈ ಅನುದಾನವನ್ನು ರಾಜ್ಯದ ಮಹಿಳಾ ಸುರಕ್ಷೆ ಮತ್ತು ಭದ್ರತೆ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲಾಗಿದೆಯೇ; (ಇಲಾಖಾವಾರು ಮತ್ತು ಕಾರ್ಯಕ್ರಮವಾರು ಸಂಪೂರ್ಣ ವಿವರ ಒದಗಿಸುವುದು)

(ಇ) ಈ ಅನುದಾನವನ್ನು ಸದ್ಬಳಕೆ ಮಾಡದೇ ಕೇಂದ್ರ ಸರ್ಕಾರಕ್ಕೆ ಹಿಂತಿರುಗಿಸಿರುವ ಪ್ರಕರಣಗಳು ಯಾವುವು ಮತ್ತು ಅಂತಹ ನಿರ್ಲಕ್ಷ್ಯತೆ ತೋರಿರುವ ಇಲಾಖಾ ಮುಖ್ಯಸ್ಥರ ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)